## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಾಸನ ಜಿಲ್ಲೆ, ಅರಸೀಕೆರೆ ತಾಲ್ಲೂಕಿನ ಗ್ರಾಮೀಣ ಪ್ರದೇಶದ 530 ಜನವಸತಿಗಳಿಗೆ ಶಾಶ್ವತ ಮತ್ತು ಸುರಕ್ಷಿತ ಕುಡಿಯುವ ನೀರು ಸರಬರಾಜು ಮಾಡಲು ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ DBOT ಮರು ಟೆಂಡರ್‌ಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/24/ಗ್ರಾನೀಸ(5)2010, ದಿ:19.10.2010.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/153/ಗ್ರಾನೀಸ(5)2012, ದಿ:18.07.2013.
3. ದಿನಾಂಕ:20.02.2015ರ ನಡೆದ SLSSC ಸಭೆಯ ನಡವಳಿಗಳು.
4. ದಿನಾಂಕ:06.03.2015ರ ನಡೆದ STA ಸಭೆಯ ನಡವಳಿಗಳು.
5. ಸರ್ಕಾರದ ಆದೇಶ ಸಂ:ಗ್ರಾಅಪ/50/ಗ್ರಾನೀಸ(5)15, ದಿನಾಂಕ:08.05.2015.

---

**ಪೀಠಿಕೆ:**

ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಬಾಣಾವರ ಮತ್ತು ಇತರೆ 348 ಗ್ರಾಮಗಳು ಹಾಗೂ ಗಂಡಸಿ ಮತ್ತು ಇತರ 127 ಗ್ರಾಮಗಳು ಸೇರಿದಂತೆ ಒಟ್ಟು 477 ಗ್ರಾಮಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ರೂ.86.85ಕೋಟಿಗಳಲ್ಲಿ ಬಹುಗ್ರಾಮ ಯೋಜನೆಯನ್ನು ಕೈಗೆತ್ತಿಕೊಳ್ಳಲು ದಿನಾಂಕ:19.10.2010ರಂದು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

2. ಆರ್ಥಿಕ ಮತ್ತ ತಾಂತ್ರಿಕ ಕಾರ್ಯಸಿಂಧುತ್ವವಿರುವ ಬಹುಗ್ರಾಮ ಯೋಜನೆಗಳನ್ನು DBOT ಆಧಾರದ ಮೇಲೆ ಅನುಷ್ಠಾನಗೊಳಿಸಲು ದಿ:01.10.2011ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ(SLSSC) ಸಭೆಯಲ್ಲಿ ತೀರ್ಮಾನಿಸಲಾಗಿದೆ.

3. ಈ ಯೋಜನೆ ಅನುಷ್ಠಾನಕ್ಕೆ ಎರಡು ಬಾರಿ ಟೆಂಡರ್ ಪ್ರಕಟಣೆ ಹೊರಡಿಸಿದ್ದು, ಯಾವುದೇ ಬಿಡ್‌ದಾರರು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿರುವುದಿಲ್ಲ. ಇದನ್ನು ಪರಿಶೀಲಿಸಿ,100% ಸರ್ಕಾರಿ ಬಂಡವಾಳದ ಮೇಲೆ DBOT ಪದ್ಧತಿಯಲ್ಲಿ ಟೆಂಡರ್ ಕರೆಯಲು ಅನುಮತಿ ನೀಡಲಾಗಿತ್ತು. ಅದರಂತೆ ದಿ:14.09.2012ರಂದು ಕರೆಯಲಾದ ಟೆಂಡರ್‌ಗೆ M/s JITF, , ನ್ಯೂ ದೆಹಲಿರವರು ತಾಂತ್ರಿಕ ಮತ್ತು ಆರ್ಥಿಕ ಬಿಡ್‌ಗಳನ್ನು ಸಲ್ಲಿಸಿದ್ದು, ಅದನ್ನು ರಾಜ್ಯ ಮಟ್ಟದ ತಾಂತ್ರಿಕ ಸಮಿತಿ ಪರಿಶೀಲಿಸಿ ಒಪ್ಪಿದ ನಂತರ ಮೇಲೆ (2)ರಲ್ಲಿ ಓದಲಾದ ದಿನಾಂಕ:18.07.2013ರ ಆದೇಶದಲ್ಲಿ M/s JITF, Water Infrastructure Ltd., ನ್ಯೂ ದೆಹಲಿ ಸಂಸ್ಥೆ ಮುಖೇನ ರೂ.150.50ಕೋಟಿ ಅಂದಾಜು ವೆಚ್ಚದಲ್ಲಿ DBOT ಆಧಾರದ ಮೇಲೆ ಯೋಜನೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ.

4. ನೀರಿನ ಜಲಮೂಲ, ಹೆಚ್ಚುವರಿ ಗ್ರಾಮಗಳ ಸೇರ್ಪಡೆ, ಕೊಳವೆ ಮಾರ್ಗದ ಉದ್ದದಲ್ಲಿನ ವ್ಯತ್ಯಾಸ ಮತ್ತು ತತ್ಸಂಬಂಧವಾದ ಆರ್ಥಿಕ ಹೆಚ್ಚಳಕ್ಕೆ ಸ್ಪಷ್ಟೀಕರಣ ಕುರಿತಾದ ಪತ್ರ ವ್ಯವಹಾರ ಹಾಗೂ ಸಂಧಾನದ ಕಾರಣ ಎರಡು ವರ್ಷಗಳ ಕಾಲ ಕಳೆದರೂ ಕಾಮಗಾರಿಯನ್ನು ಸದರಿ ಸಂಸ್ಥೆಯವರು ಪ್ರಾರಂಭಿಸಿರುವುದಿಲ್ಲ.

ಈ ಮಧ್ಯೆ ಕಾಮಗಾರಿಯ ಟೆಂಡರ್ ದರವನ್ನು ಪರಿಷ್ಕರಿಸಬೇಕೆಂದು ಸಹ ಈ ಸಂಸ್ಥೆಯು ಒತ್ತಾಯಿಸಿ ಮನವಿಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದರು.

5. ಈ ಯೋಜನೆಯನ್ನು ಕೈಗೆತ್ತಿಕೊಳ್ಳುವುದರಲ್ಲಿ ಸದರಿ ಸಂಸ್ಥೆಯವರು ವಿಳಂಬ ಮಾಡಿದ್ದರಿಂದ ದಿ:03.01.2015ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಅಪಂರಾಜ್ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಯೋಜನೆಯನ್ನು ಮರು ಟೆಂಡರ್ ಕರೆಯಲು ತೀರ್ಮಾನಿಸಲಾಯಿತು. ಮರು ಟೆಂಡರನ್ನು ಕರೆಯುವ ಸಂದರ್ಭದಲ್ಲಿ, ಹಿಂದೆ ಕರೆಯಲಾಗಿದ್ದ 477 ಗ್ರಾಮಗಳ ಜೊತೆಗೆ ಬಾಕಿ ಉಳಿದ 53 ಜನವಸತಿಗಳನ್ನು ಪರಿಗಣಿಸಲು ತೀರ್ಮಾನಿಸಲಾಯಿತು. ಆದರಂತೆ ಸದರಿ ಪ್ರಸ್ತಾವನೆಯನ್ನು ದಿನಾಂಕ:20.02.2015ರಂದು ನಡೆದ SLSSC ಸಭೆಯಲ್ಲಿ ಮಂಡಿಸಿ, ಚರ್ಚಿಸಿದ್ದು ಸಮಿತಿಯ ಶಿಫಾರಸ್ಸಿನಂತೆ ಯೋಜನೆಯನ್ನು ಪುನರ್‌ವಿನ್ಯಾಸಗೊಳಿಸಿ ರೂ.209.00ಕೋಟಿಗಳಿಗೆ ಪರಿಷ್ಕೃತವಾಗಿರುವ ಅಂದಾಜು ವೆಚ್ಚಕ್ಕೆ STA ಅನುಮೋದನೆ ನೀಡಿದ್ದು, ಮುಖ್ಯ ಇಂಜಿನಿಯರ್, ಗ್ರಾಕುನೀನೈ ಇಲಾಖೆರವರು ಬಹುಗ್ರಾಮ ಯೋಜನೆಯಡಿ ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ 530 ಗ್ರಾಮಗಳಿಗೆ ಕುಡಿಯುವ ನೀರನ್ನು ಸರಬರಾಜು ಮಾಡಲು, ರೂ.209.00ಕೋಟಿಗಳಲ್ಲಿ DBOT ಆಧಾರದ ಮೇಲೆ ಮರು ಟೆಂಡರ್ ಕರೆಯಲು ಅನುಮೋದನೆ ನೀಡುವಂತೆ ಕೋರಿದ್ದು, ಮೇಲೆ (5)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಮರು ಟೆಂಡರ್ ಕರೆಯಲು ಸರ್ಕಾರದ ಅನುಮೋದನೆ ನೀಡಲಾಗಿರುತ್ತದೆ.

6. ಈ ಹಿನ್ನೆಲೆಯಲ್ಲಿ ಹಾಸನ ಜಿಲ್ಲೆ, ಅರಸೀಕೆರೆ ತಾಲ್ಲೂಕಿನ ಗಂಡಸಿ ಮತ್ತು ಬಾಣಾವರ ಬ್ಲಾಕ್‌ಗಳ 530 ಜನವಸತಿಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆ ಕಾಮಗಾರಿಗೆ DBOT ಆಧಾರದಡಿಯಲ್ಲಿ ದಿ:09.06.2015 ರಂದು ಅಲ್ಪಾವಧಿ ಟೆಂಡರ್ ಕರೆಯಲಾಗಿದ್ದು, ಸದರಿ ಟೆಂಡರ್‌ನಲ್ಲಿ ಇಬ್ಬರು ಗುತ್ತಿಗೆದಾರರು ಭಾಗವಹಿಸಿದ್ದು, ಈ ಪೈಕಿ ಮೆ: MEIL, 1ನೇ ದರ್ಜೆ ಗುತ್ತಿಗೆದಾರರು, ಹೈದರಾಬಾದ್‌ರವರು ರೂ.279.48ಕೋಟಿ ಮತ್ತು ಮೆ:IHP, ಮುಂಬಯಿರವರು ರೂ.296.65ಕೋಟಿಗಳನ್ನು ನಮೂದಿಸಿದ್ದು, ಮೆ: MEIL, 1ನೇ ದರ್ಜೆ ಗುತ್ತಿಗೆದಾರರು, ಹೈದರಾಬಾದ್ ರವರು ನಮೂದಿಸಿರುವ ರೂ.279.48ಕೋಟಿ ಬಿಡ್ ಅತ್ಯಂತ ಕಡಿಮೆ ಬಿಡ್ ಆಗಿರುತ್ತದೆ.

7. ಸದರಿ ಟೆಂಡರ್‌ನ್ನು ತುಲನೆ ಮಾಡುವ ಸಲುವಾಗಿ ಮುಖ್ಯ ಇಂಜಿನಿಯರ್ ಕಛೇರಿಯಲ್ಲಿ ದಿ:03.10.2015, 13.10.2015, 03.11.2015 ಮತ್ತ 09.11.2015ರಂದು ಟೆಂಡರ್ ಪರಿಶೀಲನಾ ಸಮಿತಿ ಸಭೆಗಳನ್ನು ನಡೆಸಿದ್ದು, ಬಿಡ್‌ನ ಹೆಚ್ಚುವರಿ ಮೊತ್ತಕ್ಕೆ ಸಂಬಂಧಿಸಿದಂತೆ ಈ ಕೆಳಕಂಡಂತೆ ವಿವರಣೆ ನೀಡಿರುತ್ತಾರೆ.

ಅಂತಿಮವಾಗಿ PSRನಲ್ಲಿ ಕೈಬಿಡಲಾಗಿರುವ ಐಟಂಗಳು ಹಾಗೂ ಕೆಳಕಂಡ ಕಾರಣಗಳಾದ Increase in Raw water rising main, Change of Pipe type in distribution main, MS/DI Pipe (from MBR to ZBR'S), Bulk flow meters, WTP Recycle Plant, electrically operated valves, additional Quarters and workable approach bridge to MBR'S & ZBR ಗಳನ್ನು ಪರಿಗಣಿಸಿದ ಮೊತ್ತ ರೂ.12.78ಕೋಟಿ ಆಗಿದ್ದು ರೂ.3.98ಕೋಟಿ

ಮೊತ್ತ ಕೈಬಿಟ್ಟ ನಂತರ ಗುತ್ತಿಗೆದಾರರ ನಮೂದಿತ ಮೊತ್ತ ರೂ.275.51ಕೋಟಿ ಆಗಿರುತ್ತದೆ. ಪರಿಷ್ಕೃತ ಅಂದಾಜು ಮೊತ್ತವಾದ ರೂ.221.15ಕೋಟಿಯನ್ನು ಗುತ್ತಿಗೆದಾರರು ಸೂಚಿಸಿರುವ ದರವಾದ ರೂ.275.51ಕೋಟಿಯನ್ನು ಹೋಲಿಸಿದಾಗ (275.51–221.15)/221.15)*100=ಶೇ.24.58ರಷ್ಟು(ಮೇಲ್ಕಂಡ ಮೊತ್ತವನ್ನು ಪರಿಗಣಿಸಿದ ತರುವಾಯ ರೂ.54.36ಕೋಟಿ ಹೆಚ್ಚುವರಿಯಾಗುತ್ತದೆ.) ಹೆಚ್ಚಾಗಿದ್ದು, ಮೇಲ್ಕಂಡ ದರಗಳು ಅತ್ಯಧಿಕವಾಗಿದ್ದುದರಿಂದ ದಿ:23.07.2016ರಂದು ಗುತ್ತಿಗೆದಾರರೊಂದಿಗೆ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಮರುದರ ಸಂಧಾನ ಸಭೆ ನಡೆಸಿರುತ್ತಾರೆ. ಸದರಿ ಸಭೆಯಲ್ಲಿ ಅಂತಿಮ ಬಿಡ್‌ದಾರರಾದ ಮೆ:MEIL, 1ನೇ ದರ್ಜೆ ಗುತ್ತಿಗೆದಾರರು, ಹೈದರಾಬಾದ್‌ರವರು ಪ್ರಸ್ತಾಪಿತ ಕಾಮಗಾರಿಯನ್ನು ರೂ.254.32ಕೋಟಿಗಳಲ್ಲಿ ಅನುಷ್ಠಾನ ಮಾಡಲು ಒಪ್ಪಿಗೆ ಪತ್ರ ನೀಡಿದ್ದು, ಸದರಿ ಮೊತ್ತಕ್ಕೆ ಅನುಮೋದನೆ ನೀಡಲು ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಕಡತ ಸಂಖ್ಯೆ:ಗ್ರಾಅಪ 37 ಗ್ರಾನೀಸ(5)2016ರಲ್ಲಿನ ಕಂಡಿಕೆ ಸಂಖ್ಯೆ 254ರಲ್ಲಿ ಶಿಫಾರಸ್ಸು ಮಾಡಿರುತ್ತಾರೆ. ಗುತ್ತಿಗೆದಾರರ ಒಪ್ಪಿತ ಮೊತ್ತವಾದ ರೂ.254.32ಕೋಟಿಗಳನ್ನು ಪರಿಷ್ಕೃತ ಅಂದಾಜು ಮೊತ್ತವಾದ ರೂ.221.15ಕೋಟಿಗೆ ಹೋಲಿಸಿದಾಗ ಅದು 15% ಹೆಚ್ಚಿಗೆ ಇರುತ್ತದೆ.(TENDER Premium 15%) ಸದರಿ ಪ್ರಸ್ತಾವನೆಯನ್ನು ಅನುಷ್ಠಾನಗೊಳಿಸಲು ಆರ್ಥಿಕ ಇಲಾಖೆಯು ಹೆಚ್ಚುವರಿಯಾಗಿ ಅನುದಾನವನ್ನು ಒದಗಿಸಿದಲ್ಲಿ, ಮಾತ್ರ ಅನುಷ್ಠಾನಗೊಳಿಸಬಹುದು ಎಂಬ ನಿಬಂಧನೆಯೊಂದಿಗೆ ಆದೇಶ ಹೊರಡಿಸಲು ಉದ್ದೇಶಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 37 ಗ್ರಾನೀಸ(5)2016 ಬೆಂಗಳೂರು, ದಿನಾಂಕ:20.08.2016.**

ಪೀಠಿಕೆಯಲ್ಲಿನ ಪ್ರಸ್ತಾನೆಯನ್ನು ಪರಿಶೀಲಿಸಿ, ಹಾಸನ ಜಿಲ್ಲೆ, ಅರಸೀಕೆರೆ ತಾಲ್ಲೂಕಿನ ಗ್ರಾಮೀಣ ಪ್ರದೇಶದ 530 ಜನವಸತಿಗಳಿಗೆ ಶಾಶ್ವತ ಮತ್ತು ಸುರಕ್ಷಿತ ಕುಡಿಯುವ ನೀರು ಒದಗಿಸುವ ಸಲುವಾಗಿ ಬಹುಗ್ರಾಮ ಯೋಜನೆಯನ್ನು DBOT ಆಧಾರದ ಮೇಲೆ (5 ವರ್ಷಗಳ O&M ವೆಚ್ಚ ಸೇರಿದಂತೆ) **ರೂ.254.32ಕೋಟಿ (ಇನ್ನೂರ ಐವತ್ತನಾಲ್ಕು ಕೋಟಿ ಮೂವತ್ತೆರಡು ಲಕ್ಷ ರೂಪಾಯಿಗಳು ಮಾತ್ರ)** ಮೊತ್ತದಲ್ಲಿ ಅನುಷ್ಠಾನಗೊಳಿಸಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.

a) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳಾನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ – ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

c) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ಹಾಗೂ ತದನಂತರ **5** ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು (ವಿದ್ಯುತ್ ಶುಲ್ಕ ಹೊರತುಪಡಿಸಿ) ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

d) ಕರಾರು ಪತ್ರದನ್ವಯ ಜನವಸತಿಗಳಿಗೆ ಕನಿಷ್ಠ 22.041 MLDನ್ನು ಶುದ್ಧ ಕುಡಿಯುವ ನೀರು ಪೂರೈಸಲು ಕ್ರಮವಹಿಸಬೇಕು ಮತ್ತು 70 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಸದರಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

e) ಟೆಂಡರ್ ಬಿಡ್ ಡಾಕ್ಯೂಮೆಂಟನಲ್ಲಿ ಸೂಚಿಸಿರುವ ಕಾಲಮಿತಿಯೊಳಗೆ ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

f) ಯೋಜನಾ ಅಂದಾಜು ಮೊತ್ತದ ಕನಿಷ್ಠ **10%**ನ್ನು ಸಂಸ್ಥೆಯು ಯೋಜನೆ ಕಾರ್ಯಗತಗೊಳಿಸಿ ತೃಪ್ತಿಕರ **O&M** ವ್ಯವಸ್ಥೆ ನಿರೂಪಿಸುವ ಕಾರ್ಯಕ್ಷಮತೆ ಆಧರಿಸಿ ನಂತರ ಪಾವತಿಸಬೇಕು.

g) ಈ ಯೋಜನೆಯಡಿಯಲ್ಲಿನ ಅಂದಾಜು ಘೋಷ್ವಾರೆಯಂತೆ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ **CE-RDWSD** ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವರದಿ ಮಾಡತಕ್ಕದ್ದು.

h) ಈ ಯೋಜನೆಯನ್ನು ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದಕ್ಕಾಗಿ ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜರೂರಾಗಿ ಕ್ರಮವಹಿಸತಕ್ಕದ್ದು.

3. ಈ ಆದೇಶವನ್ನು ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ:ಆಇ 03 ವೆಚ್ಚ-6/2016 ದಿ:27.04.2016ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ(ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಗಳು :**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.

9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ / ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ / ವಿಕಾಸಸೌಧ ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು.
11. ಬೆಂಗಳೂರು ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು-09
12. ವ್ಯವಸ್ಥಾಪಕ ನಿರ್ದೇಶಕರು KUIDFC Unity Building ಆವರಣ ಬೆಂಗಳೂರು.
13. ವ್ಯವಸ್ಥಾಪಕ ನಿರ್ದೇಶಕರು KUWS&DB ಜಲ ಭವನ ಬನ್ನೇರಘಟ್ಟ ರಸ್ತೆ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, ಕಾವೇರಿಭವನ, ಬೆಂಗಳೂರು-09.
16. ಹಾಸನ ಜಿಲ್ಲಾ ಪಂಚಾಯತ್ ಅಧ್ಯಕ್ಷರು.
17. ಹಾಸನ ಜಿಲ್ಲೆಯ ಜಿಲ್ಲಾಧಿಕಾರಿಗಳು.
18. ಹಾಸನ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
19. ಹಾಸನ ಜಿಲ್ಲೆಯ ಉಪ-ವಿಭಾಗ ಅಧಿಕಾರಿಗಳು.
20. ತಹಸೀಲ್ದಾರರು ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕಗಳು.
21. ಕಾರ್ಯನಿರ್ವಹಣಾ ಅಧಿಕಾರಿಗಳು ಎಲ್ಲಾ ತಾಲ್ಲೂಕಗಳು ಪಂಚಾಯತ್ ಹಾಸನ ಜಿಲ್ಲೆ.
22. ಸರ್ಕಾರದ ಪ್ರಧಾನ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
23. ಆಯುಕ್ತರು ಹಾಗೂ ಪದನಿಮಿತ ಕಾರ್ಯದರ್ಶಿ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ MGNREGS.
24. ಆಯುಕ್ತರು, RDWSD ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು / ಇವರುಗಳ ಆಪ್ತ ಸಹಾಯಕರು.
25. ಉಪ ನಿರ್ದೇಶಕರು, Network Management Center (TNMC), ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
26. ಖಜಾನಾಧಿಕಾರಿಗಳು ಜಿಲ್ಲಾ ಹಾಸನ.
27. **ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್,** BWSSB **ಬ್ರ್ಯಾಂಚ್, ರಾಜದ್ದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.**
28. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
29. ಹಾಸನ ಜಿಲ್ಲಾ ಪಂಚಾಯತ್ ಎಲ್ಲಾ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂ.ರಾ.ಇಂ, ಮತ್ತು ಗ್ರಾ.ಕು.ನೀ ಮತ್ತು ನೈರ್ಮಲ್ಯ ಉಪ ವಿಭಾಗಗಳು.
30. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
31. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
32. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
33. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿಗಳು.